ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಐ.ಟಿ.ಐ. ಕಾಲೇಜುಗಳಿಗೆ ಅಲ್ಪಸಂಖ್ಯಾತರ ಸ್ಥಾನಮಾನ ನೀಡುವ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

1428 (1690) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ (ಐ.ಟಿ.ಐ) ಅಲ್ಪಸಂಖ್ಯಾತರ ಸ್ಥಾನಮಾನವನ್ನು ನೀಡಲಾಗುತ್ತಿದೆಯೇ ;

(ಆ) ನೀಡಲಾಗುತ್ತಿದ್ದಲ್ಲಿ, ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಇ) ಕಳೆದ 3 ವರ್ಷಗಳಿಂದ ಎಷ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳು ಅಲ್ಪಸಂಖ್ಯಾತ ಸ್ಥಾನಮಾನ ಕೋರಿ ಅರ್ಜಿಗಳನ್ನು ಸಲ್ಲಿಸಿವೆ ; ಎಷ್ಟು ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ ; ಎಷ್ಟು ಪ್ರಕರಣ ಬಾಕಿ ಇದೆ; ಬಾಕಿ ಇರಲು ಕಾರಣವೇನು ; (ವಿವರ ಒದಗಿಸುವುದು)

(ಈ) ಬಾಕಿ ಇರುವ ಅರ್ಜಿಗಳಿಗೆ ಯಾವ ಕಾಲಮಿತಿಯೊಳಗೆ ಅನುಮತಿ ನೀಡಲಾಗುವುದು ?